ಕರ್ನಾಟಕ ಸರ್ಕಾರ

# Govt of Karnataka

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ– 587102

OFFICE OF THE DEPUTY COMMISSIONER, BAGALKOT DISTRICT, BAGALKOT- 587103

Ph: 08354-235091 Fax: 08354-235096 E-mail:deo.bagalkot@gmail.com

ಸಂಖ್ಯೆ: ಜಿಅಬಾ/ಸಿಬ್ಬಂದಿ–1/ಸಿಆರ್–06/2019–20 ದಿನಾಂಕ: 04–06–2019

## –:ಅಧಿಸೂಚನೆ:–

ಕರ್ನಾಟಕ ಸರಕಾರದ ಕಂದಾಯ ಇಲಾಖೆಯ ಬಾಗಲಕೋಟೆ ಜಿಲ್ಲಾ ಘಟಕದಲ್ಲಿ ಬರುವ ತಾಲೂಕುಗಳಲ್ಲಿ 2010–11 ನೇ ಸಾಲಿನ ನೇಮಕಾತಿ ಪ್ರಕ್ರಿಯೆಯಯಲ್ಲಿ ನೇಮಕಾತಿ ಆದೇಶ ನೀಡಿರುವ ಅಭ್ಯರ್ಥಿಗಳಲ್ಲಿ 06 ಜನರು ಕರ್ತವ್ಯಕ್ಕೆ ಹಾಜರಾಗದೇ ಹುದ್ದೆಗಳು ಖಾಲಿ ಉಳಿದಿವೆ. ಅನಂತರ ವಯೋ ನಿವೃತ್ತಿ,ರಾಜಿನಾಮೆ,ಮುಂಬಡ್ತಿ,ವರ್ಗಾವಣೆ ಇನ್ನಿತರ ಕಾರಣಗಳಿಂದ 52 ಹುದ್ದೆಗಳು ತೆರವಾಗಿವೆ.ಆದ್ದರಿಂದ ಒಟ್ಟು 58 ಗ್ರಾಮಲೆಕ್ಕಾಧಿಕಾರಿ ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ರೇವಿನ್ಯೂ ಸಬೊರ್ಡಿನೇಟ್ ಬ್ರ್ಯಾಂಚ್) (ಕೇಡರ್ & ರಿಕ್ರೂಟ್‌ಮೆಂಟ್ ) (ತಿದ್ದುಪಡಿ)ನಿಯಮಗಳು 2008 ಮತ್ತು 2009 ರನ್ವಯ, ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ :ಕಂಇ/04/ಬಿಎಸ್ ಸಿ/2011, ದಿನಾಂಕ 25–02–2011 ರಲ್ಲಿ ಅನುಮೋದನೆ ನೀಡಿದೆ.ಅದರಂತೆ ಗ್ರಾಮಲೆಕ್ಕಾಧಿಕಾರಿಗಳ ಖಾಲಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ, ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಅಹ್ವಾನಿಸಲಾಗಿದೆ.

### ಸನ್ 2018–19 ನೇ ಸಾಲಿನಲ್ಲಿ ಖಾಲಿ ಇರುವ ಹುದ್ದೆಗಳ ವರ್ಗೀಕರಣ

### [ರೋಸ್ಟರ್ ಬಿಂದು 65 ರಿಂದ 100 ಮತ್ತು 01 ರಿಂದ 22 ರ ವರೆಗೆ)

| ಕ್ರ.ಸಂ: | ಹುದ್ದೆಯ ಹೆಸರು | ಒಟ್ಟು ಹುದ್ದೆ | ವರ್ಗೀಕರಣ | | | | | | | | |
|---|---|---|---|---|---|---|---|---|---|---|---|
| | | | ಪ್ರವರ್ಗ | ಇತರೆ | ಮ.ಅ. | ಗ್ರಾ.ಅ. | ಮಾ.ಸೈ. | ಕ.ಮಾ.ಅ. | ಯೋನಿಅ | ಅಂ.ವಿ. | ಒಟ್ಟು |
| 01 | ಗ್ರಾಮ ಲೆಕ್ಕಾಧಿಕಾರಿ | 58 | ಪ.ಜಾ. | 2 | 2 | 1 | 1 | 1 | 1 | – | 08 |
| | | | ಪ.ಪಂ. | – | 1 | – | – | – | – | 1 | 02 |
| | | | ಪ್ರ–1 | – | 1 | 1 | – | – | – | – | 02 |
| | | | ಪ್ರ–2ಎ | – | 4 | 2 | – | 1 | 1 | – | 08 |
| | | | ಪ್ರ–2ಬಿ | 1 | – | 1 | – | – | – | – | 02 |
| | | | ಪ್ರ–3ಎ | 1 | 1 | 1 | – | – | – | – | 03 |
| | | | ಪ್ರ–3ಬಿ | 1 | 2 | 1 | – | – | – | – | 04 |
| | | | ಸಾ.ಅ. | 5 | 10 | 7 | 3 | 1 | 1 | 2 | 29 |
| | | | ಒಟ್ಟು | 10 | 21 | 14 | 04 | 03 | 03 | 03 | 58 |

1) ಅರ್ಜಿ ಶುಲ್ಕ

| | |
|---|---|
| ಪರಿಶಿಷ್ಟ ಜಾತಿ,ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-1 | ರೂ. 50-00 |
| ಸಾಮಾನ್ಯ ವರ್ಗ ,2 ಎ,2 ಬಿ, 3 ಎ,3 ಬಿ, ವರ್ಗಕ್ಕೆ | ರೂ.200-00 |

1) **ಅರ್ಜಿ ಸಲ್ಲಿಸುವ ವಿಧಾನ :** ಅರ್ಜಿಗಳನ್ನು ಆನ್ ಲೈನ್ (Online)(ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್ ಸೈಟ್ http://bagalkot-va.kar.nic.in ತೆರೆದು ಕಂಪ್ಯೂಟರ ಪರದೆಯ ಮೇಲೆ ಬರುವ ಅರ್ಜಿಯನ್ನು ತುಂಬಬೇಕು. ನಂತರ ಅಭ್ಯರ್ಥಿಯು ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು (ipg/gif) **Browse** ಮಾಡಿ **Preview** ಪರಿಶೀಲಿಸಿ, ನಂತರ ಬರುವ **Security Code** ನಮೂದಿಸಿ"Submit Button` ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ನ್ ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತ ಪತ್ರ (Acknowledgement Slip) ಮತ್ತು ದ್ವಿಪ್ರತಿ ಚಲನವನ್ನು ತೆಗೆದುಕೊಳ್ಳತಕ್ಕದ್ದು. ಶುಲ್ಕವನ್ನು ಆನ್ ಲೈನ್ ಮೂಲಕ ಪಾವತಿಸಲು ಅವಕಾಶವಿರುತ್ತದೆ. ಚಲನ ಮೂಲಕ ಸಹ ಪಾವತಿಸಲು ಅವಕಾಶವಿದ್ದು, ಚಲನ ಸೃಷ್ಟಿಸಲು https://www.onlinesbi.com/sbicollect/icollecthome.htm?corpID=953609 ಈ ರೀತಿ ಅವಕಾಶವಿರುತ್ತದೆ. ಬ್ಯಾಂಕಿನಲ್ಲಿ ನಿಗದಿತ ಅರ್ಜಿ ಶುಲ್ಕವನ್ನು ಪಾವತಿಸಲು ದಿನಾಂಕ:04-07-2019 ಕೊನೆ ದಿನಾಂಕವಾಗಿರುತ್ತದೆ. ಅಭ್ಯರ್ಥಿಯು ಸ್ವೀಕೃತಿ ಸ್ಲಿಪ್‌ನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನೆಗೆ ನಿಗದಿಪಡಿಸಿದ ದಿನಾಂಕದಂದು ಹಾಜರಪಡಿಸತಕ್ಕದು. ಡಿ.ಡಿ,ಪೋಸ್ಟಲ್ಆರ್ಡರ್,ಮನಿಯಾರ್ಡರ್,ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೇ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ, ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇತರ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕದ್ದು.

1) ಅರ್ಜಿಗಳನ್ನು ದಿನಾಂಕ 4-6-**2019** ರಿಂದ **4-07-2019** ರ ಒಳಗಾಗಿ ಸಲ್ಲಿಸತಕ್ಕದ್ದು.
2) ಅರ್ಜಿಶುಲ್ಕವನ್ನು ದಿನಾಂಕ 4-6-**2019** ರಿಂದ **4-07-2019** ವರೆಗೆ ಸ್ಟೇಟ್ ಬ್ಯಾಂಕ್ ಆಫ ಇಂಡಿಯಾದ ಬ್ಯಾಂಕ್ ಶಾಖೆಯಲ್ಲಿ ಬ್ಯಾಂಕ್ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.
3) ಅಭ್ಯರ್ಥಿಗಳು ಆನ್-ಲೈನ್ ನಲ್ಲಿ ನಿಗದಿತ ಶುಲ್ಕ ಪಾವತಿಯ ಕುರಿತು ವಸ್ತು ಸ್ಥಿತಿ (Status) ಅನ್ನುಶುಲ್ಕ ಪಾವತಿಸಿದ 05 ದಿವಸಗಳ ನಂತರ ಪರಿಶೀಲಿಸಿಕೊಳ್ಳಬಹುದು. ಪಾವತಿಯಾಗಿರುವುದು ಖಚಿತವಾಗದಿದ್ದಲ್ಲಿ ಚಲನ ಪ್ರತಿಯನ್ನು ಈ ಕಾರ್ಯಾಲಯಕ್ಕೆ ಕಳುಹಿಸತಕ್ಕದ್ದು.

4) **ಅರ್ಹತಾ ಷರತ್ತುಗಳು:-**

ಅ)ಅಭ್ಯರ್ಥಿಯು ಭಾರತೀಯ ನಾಗರೀಕನಾಗಿರತಕ್ಕದ್ದು.

ಆ)ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.

**5)ಶೈಕ್ಷಣಿಕ ವಿದ್ಯಾರ್ಹತೆ:**

ಪಿಯುಸಿ ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

**6) ವೇತನ ಶ್ರೇಣಿ :** 21400–500–22400–550–24600–600–27000–650–29600–750–32600– 850–36000–950–39800–1100–42000

**7) ವಯೋಮಿತಿ :**_ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ4 /07/2019 ರಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| | ಕನಿಷ್ಠ | ಗರಿಷ್ಠ |
|---|---|---|
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ–1 | 18 | 40 |
| 2ಎ,2ಬಿ,3ಎ,3 ಬಿ | 18 | 38 |
| ಸಾಮಾನ್ಯ ವರ್ಗ | 18 | 35 |

ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿಸಿ) ಅಥವಾ ಕ್ಯುಮುಲೇಟಿವ್ ರೇಕಾರ್ಡನಲ್ಲಿ ನಮೂದಿಸಿರುವ ಜನ್ಮದಿನಾಂಕವನ್ನು, ಆಯ್ಕೆ ಪ್ರಾಧಿಕಾರವು ಪರಿಗಣಿಸುವುದು.ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ)1977 ರ ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 6 ರಂತೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರ ಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ..

ಎ)ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ, ಅಥವಾ ರಾಜ್ಯ ಅಧಿನಿಯಮಃ ಅಥವಾ ಕೇಂದ್ರ ಅಧಿನಿಯಮದ, ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ, ಅಥವಾ ಕೇಂದ್ರ ಅಧಿನಿಯಮದ, ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು, ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂಧರ್ಬದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ (ಹತ್ತು)ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ (ಹತ್ತು)ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಬಿ] ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

ಸಿ] ಪೂರ್ಣಾವಧಿ ಕೆಡಿಟ್ ಇನ್ಸಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ, ಹಾಗೆ ಕೆಡೆಟ್ ಇನ್ಸಸ್ಟ್ರಕ್ಟರ್ ಆಗಿ ಆತನ ಸೇವೆ ಸಲ್ಲಿಸಿರುವಷ್ಟು ವರ್ಷಗಳು.

ಡಿ] ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್ಸಪೆಕ್ಟರ್ ಆಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು.

ಇ] ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

ಎಫ್] ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣೆ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಜಿ] ಅಭ್ಯರ್ಥಿ ವಿಧವೆಯಾಗಿರುವಾಗ ಹತ್ತು ವರ್ಷಗಳು.

ಹೆಚ್] ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

**8] ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:**

1] ಜಾತಿ ಮೀಸಲಾತಿ ಕೋರಬಯಸುವ:

1. ಪ.ಜಾ./ಪ.ಪಂ. ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ(ಅನುಬಂಧ–1)
2. ಪ್ರವರ್ಗ–1 ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ(ಅನುಬಂಧ–2)

2] 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.(ಅನುಬಂಧ–3)

ಈ ಪ್ರಮಾಣ ಪತ್ರಗಳು ಈ ಹುದ್ದೆಗೆ ಅರ್ಜಿಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ: **4–7–2019** ರೊಳಗೆ ಅರ್ಹತೆಯನ್ನು ಪಡೆದಿರಬೇಕು.

3] ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ [ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ ] ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

9] ಗ್ರಾಮೀಣ ಅಭ್ಯರ್ಥಿ:-

1. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳು ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿಯವರಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು.
2. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ-2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.
3. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ನಮೂನೆ 1 ಮತ್ತು 2.,(ಅನುಬಂಧ-4)

   **ಸೂಚನೆ:-** ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು, ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

10] ಕನ್ನಡ ಮಾಧ್ಯಮ ಅಭ್ಯರ್ಥಿ:-

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ, ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, 1ನೇ ತರಗತಿಯಿಂದ 10ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ, ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು. [ ಅನುಬಂಧ-5 ]

11] ಯೋಜನಾ ನಿರಾಶ್ರಿತ ಅಭ್ಯರ್ಥಿ :-

ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. [ ಅನುಬಂಧ-6 ]

12] ಅಂಗವಿಕಲರ ಮೀಸಲಾತಿ ಬಗ್ಗೆ :-

ಕರ್ನಾಟಕ ನಾಗರೀಕ ಸೇವಾ [ಸಾಮಾನ್ಯ ನೇಮಕಾತಿ] ನಿಯಮಗಳು 1977 ರ ನಿಯಮ 9 [1-ಎ] ರ ಅನ್ವಯ ರಾಜ್ಯ ಸಿವ್ಹಿಲ್ ಸೇವೆಯಲ್ಲಿನ ಗ್ರುಫ್ 'ಸಿ' ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ:128:ಸೆನೆನಿ: 2006, ದಿನಾಂಕ: 01-08-2009 ರಂತೆ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್ 52 ಎಸ್ಎಸ್ಆರ್ 99, ದಿನಾಂಕ: 29-11-2002 ರೀತ್ಯಾ

ಗ್ರಾಮಲೆಕ್ಕಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ. 1. ಕುಷ್ಟ ರೋಗದಿಂದ ಗುಣಮುಖರಾದವರು [ Leprosy Cured ] 2. ಶ್ರವಣ ದೋಷವುಳ್ಳವರು [ Hearing impaired ] 3. ಮಾನಸಿಕ ಅಸ್ವಸ್ಥತೆ [ Mentally ill ] 4. ಚಲನ ವಲನ ವೈಕಲ್ಯ [ Loco motor Disability ] ಮೇಲಿನ ಅಂಗವಿಕಲರು ಹೊರತುಪಡಿಸಿ ಇತರ ದೈಹಿಕ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 128 ಸೇನೆನಿ 2005 ದಿನಾಂಕ: 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯ ನೀಡುವ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು, ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ [ ಅನುಬಂಧ-8 ]

ಸೂಚನೆ: ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ:4-7-**2019** ರೊಳಗೆ ಅರ್ಹತೆಯನ್ನು ಪಡೆದಿರಬೇಕು. ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿ ಪ್ರಕಟಗೊಂಡ ಅಭ್ಯರ್ಥಿಗಳು ಮಾತ್ರ ನಿಗದಿತ ದಿನಾಂಕ: 29-8-**2019** ರಂದು ಪೂರ್ವಾಹ್ನ **11-00** ಘಂಟೆಗೆ ನೇಮಕಾತಿ ಪ್ರಾಧಿಕಾರದ ಎದುರು [ ಜಿಲ್ಲಾಧಿಕಾರಿಗಳ ಕಾರ್ಯಾಲಯ ಸಂಭಾಗಣ ಬಾಗಲಕೋಟೆ ] ಮೂಲ ಪ್ರಮಾಣ ಪತ್ರಗಳನ್ನು ತಪ್ಪದೆ ಹಾಜರು ಪಡಿಸತಕ್ಕದ್ದು.

## 13] ಆಯ್ಕೆ ವಿಧಾನ:

ಕರ್ನಾಟಕ ಜನರಲ್ ಸರ್ಮೀಸಿಸ್ [ Revenue Subordinate Branch ] [ Cadre and Recruitment ] [ತಿದ್ದುಪಡಿ] ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ [ಸಾಮಾನ್ಯ ನೇಮಕಾತಿ] ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಪರೀಕ್ಷೆ ಅಥವಾ ಸಿ.ಬಿ.ಎಸ್.ಇ. ಅಥವಾ ಐ.ಸಿ.ಎಸ್.ಇ. ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳು [ On merit ] ಆಧಾರದ ಮೇಲೆ ಆಯಾ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು. ನಿಯಮಾವಳಿಯಂತೆ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ: **17-07-2019** ರಂದು ಪ್ರಕಟಿಸಲಾಗುವುದು.

## 14] ಪ್ರಮುಖ ಸೂಚನೆಗಳು:

ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿದ್ದ ಅಭ್ಯರ್ಥಿಗಳು ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ನಿಗದಿಪಡಿಸಿದ ದಿನಾಂಕದಂದು ಹಾಜರಪಡಿಸತಕ್ಕದ್ದು.

- ಪಿ.ಯು.ಸಿ. ಪರೀಕ್ಷೆ ಅಥವಾ ಸಿ.ಬಿ.ಎಸ್.ಇ. ಅಥವಾ ಐ.ಸಿ.ಎಸ್.ಇ. ನಡೆಸುವ 12 ನೇ ತರಗತಿ ಪರೀಕ್ಷೆಯ ಪ್ರಮಾಣ ಪತ್ರ.
- ಹುಟ್ಟಿದ ದಿನಾಂಕದ ಪ್ರಮಾಣ ಪತ್ರ [ ಎಸ್.ಎಸ್.ಎಲ್.ಸಿ. ಅಥವಾ ಕ್ಯುಮುಲೇಟಿವ್ ದಾಖಲೆ ]

- ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು [ No Objection Certicate ] ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರಬೇಕು. (ಅನುಬಂಧ-7)
- ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ [ಅನುಬಂಧ-1, ನಮೂನೆ-ಡಿ] ಮತ್ತು ಪ್ರವರ್ಗ-1 [ಅನುಬಂಧ-2, ನಮೂನೆ-ಇ] ಹಾಗೂ 2ಎ, 2ಬಿ, 3ಎ, 3ಬಿ [ ಅನುಬಂಧ-3, ನಮೂನೆ-ಎಫ್ ] ಮೀಸಲಾತಿ ಅಭ್ಯರ್ಥಿಗಳು ಕ್ರಮವಾಗಿ ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ ಇವರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.
- ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಗ್ರಾಮ ಸಮೂಹ ಪರಿಶೀಲಕರು ಮತ್ತು ಕ್ಯಾಡೆಟ್ ಪರಿವೀಕ್ಷಕರು ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ
- ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.

## 15] ಸಾಮಾನ್ಯ ಸೂಚನೆಗಳು:

1] ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ/ ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.

2] ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

3] ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

4] ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್‌ಲೈನ್ ಮುಖಾಂತರ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಸೂಚನೆಗಳನ್ನು ಪಾಲಿಸಬೇಕು.

5] ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

6] ಸರಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರ/ಇಲಾಖೆ ಮುಖ್ಯಸ್ಥರಿಂದ ನಿರಾಕ್ಷೇಪಣಾ ಪತ್ರ ಪಡೆದಿರತಕ್ಕದ್ದು.

7] ಆಯ್ಕೆ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದ ಇರುವುದಿಲ್ಲ.

8] ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು, ಅಧ್ಯಕ್ಷರು ಜಾತಿ ಮತ್ತು ಆದಾಯ ಪರಿಶೀಲನಾ ಮೀಸಲಾತಿ ] ಬಾಗಲಕೋಟೆ ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

9] ಆಯ್ಕೆಯು ಸರಕಾರದಿಂದ ಕಾಲಕಾಲಕ್ಕೆ ಹೊರಡಿಸುವ ನಿಯಮಗಳಿಗೆ ಒಳಪಟ್ಟಿರುತ್ತದೆ.

10] ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳನ್ನು ಬಾಗಲಕೋಟೆ ಜಿಲ್ಲಾಧಿಕಾರಿ ಕಛೇರಿಯ ಅಧಿಕೃತ ವೆಬ್‌ಸೈಟ್ ರಲ್ಲಿ ದಿನಾಂಕ: 04– 06–2019 ರಿಂದ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ ಮತ್ತು http://bagalkot-va.kar.nic.in ಸ್ಪಷ್ಟೀಕರಣ ಅಗತ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ:08354–235092 ಕ್ಕೆ ಹಾಗೂ ತಾಂತ್ರಿಕ ತೊಂದರೆಗಳಿಗೆ 9482564255 ಕ್ಕೆ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

3/6/2019

ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ
ಮತ್ತು ಜಿಲ್ಲಾಧಿಕಾರಿಗಳು, ಬಾಗಲಕೋಟೆ

## ಅನುಬಂಧ - 1

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಡಿ

(ನಿಯಮ 3ಎ (2) (3) ನೋಡಿ)

ಅನುಸೂಚಿತ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

### ಪ್ರಮಾಣ ಪತ್ರ

........................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ............................ ಜಿಲ್ಲೆಯ / ವಿಭಾಗದ ........................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ............................ ವಂಶದವರ ಮಗ / ಮಗಳಾದ ಶ್ರೀ / ಶ್ರೀಮತಿ ............................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿದವರೆಂದು ಪ್ರಮಾಣೀಕರಿಸಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ........................................ ಮತ್ತು / ಅಥವಾ ಅವನ * / ಅವಳ * ಕುಟುಂಬವು ........................................ ರಾಜ್ಯ/ಕೇಂದ್ರಾಡಳಿತ ಪ್ರದೇಶದ ........................................ ಜಿಲ್ಲಾ/ವಿಭಾಗದ ........................................ ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ(ಗಳು).

ಸಹಿ........................................

ತಹಶೀಲ್ದಾರ್........................................

ಸ್ಥಳ :

ದಿನಾಂಕ:

ಪದನಾಮ

ಕಛೇರಿಯ ಮೊಹರಿನೊಂದಿಗೆ

ರಾಜ್ಯ/ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟುಬಿಡಿ/ ಹೊಡೆದು ಹಾಕಿ.

***

ಸೂಚನೆ: ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳು" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ:ಬಿಸಿ 12028/2/78 ಎಸ್ ಸಿ ಟಿ–1 ಗೃಹಮಂತ್ರಾಲಯದ ಅನುಸಾರವಾಗಿ ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ ಭಾರತ ಸರ್ಕಾರದ ( ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್ ಟಿ (ಎಸ್ ಸಿ ಟಿ) ದಿನಾಂಕ:5ನೇ ಆಗಸ್ಟ್ 1975 ರಲ್ಲಿ ನಮೂದಿಸಿದ ಪ್ರಾಧಿಕಾರಿಯು ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗಿರುವುದಿಲ್ಲ.

ಅನುಬಂಧ - 2

( ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

**ನಮೂನೆ–ಇ**

(ನಿಯಮ 3ಏ (2)(3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

. . . . . . . . . . . . . . . . . . . . . . . . ಗ್ರಾಮ/ಪಟ್ಟಣ/ನಗರದ ನಿವಾಸಿಯಾದ ಶ್ರೀ/ಶ್ರೀಮತಿ . . . . . . . . . . . . . . . . . . ಇವರ ಮಗ/ಮಗಳು/ಪತಿ/ಪತ್ನಿಯಾದ ಶ್ರೀ/ಶ್ರೀಮತಿ . . . . . . . . . . . . . . . . . . . ಇವರು ಹಿಂದುಳಿದ ವರ್ಗಗಳ ( ಪ್ರವರ್ಗ) . . . . . . . . . . . . . ಜಾತಿಯ . . . . . ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ:

ತಹಸೀಲ್ದಾರರು

. . . . . . . ತಾಲ್ಲೂಕು

ಕಛೇರಿಯ ಮೊಹರು.

EST NOTIFI HSN

( ಪ್ರವರ್ಗ–2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ–ಎಫ್

(ನಿಯಮ 3ಎ (2)(3)ನ್ನು ನೋಡಿ)

ಪ್ರವರ್ಗ–1ರ ಹೊರತಾಗಿ, ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ . . . . . . . . . . . . . . . . ರಲ್ಲಿ ವಾಸವಾಗಿರುವ ಶ್ರೀ/ ಶ್ರೀಮತಿ . . . . . . . . . . . . . . . . . . ಇವರ ಮಗ /ಮಗಳು/ ಪತಿ/ಪತ್ನಿಯಾದ ಶ್ರೀ/ ಶ್ರೀಮತಿ/ಕುಮಾರಿ . . . . . . . . . . . . . . ಇವರು ಮತ್ತು ಆತನ/ಅವಳ ತಂದೆ ತಾಯಿ/ಪೋಷಕರು/ಪತ್ನಿ/ಪತಿಯು ಸರ್ಕಾರ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ:30/03/2002ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು: ಅಭ್ಯರ್ಥಿಯಾಗಲಿ ಅಥವಾ ಆತನ/ಆಕೆಯ ತಂದೆ ತಾಯಿ/ಪೋಷಕರಾಗಲಿ/ ಪತ್ನಿ/ಪತಿಯಾಗಲಿ ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿ ಯಾಗಿಲ್ಲವೆಂದು:

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನದ ಹುದ್ದೆಯನ್ನು ಹೊಂದಿರುವುದಿಲ್ಲ.

ಅಥವಾ

ಖಾಸಗಿ ನಿಯೋಜಕರ ಕೈ ಕೆಳಗೆ, 2ನೇ ದರ್ಜೆಯ ಅಧಿಕಾರಿಯು ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000 ಪ್ರಾರಂಭಿಕ ಹಂತ ) ಕಡಿಮೆಯಿಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು:

ಅಥವಾ

ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ಆದಾಯವು ಎರಡು ಲಕ್ಷ ಮೀರಿರುವುದಿಲ್ಲವೆಂದು:

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ ಪತಿಯು ಮಾರಾಟ ತೆರಿಗೆದಾರನಲ್ಲ , ಅಥವಾ ಆತನ/ ಆಕೆಯ ತಂದೆ ತಾಯಿ/ಪೋಷಕ/ಪತ್ನಿ/ಪತಿಯು ಅಥವಾ ಇವರಿಬ್ಬರೂ 10 ಯೂನಿಟ್ ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಷನ್ ಭೂಮಿಯನ್ನು ಹೊಂದಿರು ವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ2000, ದಿನಾಂಕ:30/03/2002ರ ಅನ್ವಯ ಶ್ರೀ/ಶ್ರೀಮತಿ/ಕುಮಾರಿ . . . . . . . . . . . . . ಇವರು . . . . . . . . . . . ಜಾತಿಗೆ . . . .. . . . . . . . . ಸೇರಿದ ಉಪಜಾತಿಯವ ರಾಗಿದ್ದು, ಸರ್ಕಾರಿ ಆದೇಶ ಸಂಖ್ಯೆ: ಎಸ್ ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ:30/03/2002ರ ಅನ್ವಯ ಹಿಂದುಳಿದ ವರ್ಗಗಳ ವರ್ಗ . . . . .. . . . . . . . ( 2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ:
ದಿನಾಂಕ:

ತಹಸೀಲ್ದಾರರು
. . . . . . . . ತಾಲ್ಲೂಕು
ಕಛೇರಿಯ ಮೊಹರು.

(ಪ್ರ)ತಿ ೨೦೧೬ - 1

# ನಮೂನೆ-1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ

ಇವರಿಗೆ:
ತಹಸೀಲ್ದಾರರು,
. . . . . . . . . . . . ತಾಲ್ಲೂಕು
. . . . . . . . . . . . . ಜಿಲ್ಲೆ.

ಮಾನ್ಯರೇ,

ಶ್ರೀ/ಶ್ರೀಮತಿ . . . . . . . . . . . . . . . . . . . . . . . . . . . . . . . ಹುಂಬುವವರ ಮಗ/ಮಗಳು/ಪತಿ/ಪತ್ನಿ . . . . . . . . . . . . . . . . . . . . . . . . . . . . . ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇವೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯ ಹುಟ್ಟಿದ ದಿನಾಂಕ, ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ:
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ:
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರ:
   ಪ್ರಾಥಮಿಕ:
   ಮಾಧ್ಯಮಿಕ:
   ಪ್ರೌಢ:
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ(ತಂದೆ/ತಾಯಿ ಜೀವಂತ ವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ ?
10. ಸಂಪತ್ತು ತೆರಿಗೆ ಪಾವತಿದಾರರೇ ?
11. ಮಾರಾಟ ತೆರಿಗೆ ಪಾವತಿದಾರರೇ ?

<u>ಅನುಬಂಧ-5</u>

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ / ಶ್ರೀಮತಿ ______________________ ರವರ ಮಗ/ಮಗಳು/ಪತ್ನಿ ಶ್ರೀ/ ಶ್ರೀಮತಿ ಕುಮಾರಿ__________________ ಜಿಲ್ಲೆ _______________ತಾಲ್ಲೂಕು ____________ ಗ್ರಾಮದಲ್ಲಿ ______________ ವಾಸವಾಗಿರುವ ಇವರು __________ತರಗತಿಯಿಂದ __________ ತರಗತಿಯವರೆಗೆ ______________ ಶೈಕ್ಷಣಿಕ ವರ್ಷದಿಂದ __________ ಶೈಕ್ಷಣಿಕ ವರ್ಷದವರೆಗೆ ____________________________ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ದಿನಾಂಕ: ______________ ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು.

ಸ್ಥಳ: ______________

<u>ಸೂಚನೆ:-</u> ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಶಾಲೆಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಶಾಲಾವಾರು ಪ್ರತ್ಯೇಕ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ ಸಲ್ಲಿಸಬೇಕು.

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಗಳು ನನಗೆ ತಿಳಿದಿರುವಷ್ಟು ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಶ್ವಾಸಿ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತವೆ ಹಾಗು ನಾನು ದೃಢೀಕರಿಸುತ್ತೇನೆ. ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅನುರೂಪ ದಂಡನೆಗೆ ಒಪ್ಪುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: (ತಂದೆ/ತಾಯಿ ಮರಣಹೊಂದಿದ್ದಲ್ಲಿ)

(ಪೋಷಕರ/ಗಂಡ/ಹೆಂಡತಿ ಸಹಿ)

## ಸ್ಥಳೀಯ ವ್ಯಕ್ತಿಗಳ ಪ್ರಮಾಣೀಕರಣ

ಅಭ್ಯರ್ಥಿಯು ಮತ್ತು ಅವರ ತಂದೆ/ತಾಯಿ/ಪೋಷಕರ/ಪತಿ/ಪತ್ನಿ ಇವರನ್ನು ನಾವು ಬಲ್ಲೆವು. ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ: 1)

(ಪೂರ್ಣ ವಿಳಾಸದೊಂದಿಗೆ) 2)

## ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ ಶ್ರೀಮತಿ . . . . . . . . . . . . . . . . . . . . . . . ಇವರು ಶ್ರೀ ಇವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ/ಕುಮಾರಿ . . . . . . . . . . . . . . . . . . . . . . ಇವರು ಕರ್ನಾಟಕ ರಾಜ್ಯದ . . . . . . . ಜಿಲ್ಲೆಯ ವಿಭಾಗ . . . . . . . . . . . . . . . . . . ಗ್ರಾಮ/ಪಟ್ಟಣ/ನಗರದಲ್ಲಿ ಖಾಯಂ ನಿವಾಸಿಯಾಗಿದ್ದಾರೆ ಮತ್ತು ಇವರು ಕೆಟಗರಿ ವರ್ಗಕ್ಕೆ ಸೇರಿದವರಾಗಿರುತ್ತಾರೆ.
2. ಶ್ರೀ/ಶ್ರೀಮತಿ . . . . . . . . . . . . . . . . . . ಇವರ ತಂದೆ/ತಾಯಿ/ಪೋಷಕರು ಸರಕಾರಿ ಆದೇಶ ಸಂಖ್ಯೆ: ಸಕಇ 251 ಬಿಸಿಎ 94, ಬೆಂಗಳೂರು, ದಿನಾಂಕ: 31/01/1995 ಅನ್ವಯ ಕೆನೆ ಪದರ (Creamy Layer) ಒಳಗೊಳ್ಳುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ದಿನಾಂಕ: ತಹಸೀಲ್ದಾರ್,

ಸ್ಥಳ: . . . . . . . . . . . . . . ತಾಲ್ಲೂಕು.

ಕಛೇರಿಯ ಮೊಹರು.

### ಅನುಬಂಧ-1

### ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ . . . . . . . . . . . . . . . ಇವರ ಮಗ/ಮಗಳು/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ . . . . . . . . . . . . . . . . . . . . . . . . . . . . . . . . . . ಜಿಲ್ಲೆ . . . . . . . . . . . . . . . . . . ತಾಲ್ಲೂಕು . . . . . . . . . . . . . . . . . . . . . . . ಗ್ರಾಮದಲ್ಲಿ . . . . . . . . . . . . . ವಾಸವಾಗಿರುವ ಇವರು ಒಂದನೇ ತರಗತಿಯಿಂದ . . . . . . . . . . . . . . ತರಗತಿಯವರೆಗೆ . . . . . . . . . . ಜಿಲ್ಲೆ . . . . . . . . . . . . ತಾಲ್ಲೂಕು . . . . . . . . . . . . ಪಟ್ಟಣ . . . . . . . . . . . . . . . . . . . . ಶಾಲೆಯಲ್ಲಿ ವ್ಯಾಸಂಗ ಮಾಡಿ . . . . . . . . . . ಸಾಲಿನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964 ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ಮಹಾ ನಗರ ಪ್ರದೇಶ ಅಥವಾ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೊಹರು ಸಹಿ: ಸಹಿ:

ಕ್ಷೇತ್ರ ಶಿಕ್ಷಣ ಅಧಿಕಾರಿ ಮುಖ್ಯೋಪಾಧ್ಯಾಯರ ಸಹಿ

ಕಛೇರಿಯ ಮೊಹರು ಮತ್ತು ಶಾಲೆಯ ಮೊಹರು

<u>ಅನುಬಂಧ-6</u>

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೇನೆನಿ 2001 ದಿನಾಂಕ: 27-07-2001

<u>ನಮೂನೆ</u>

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ

<u>ಪ್ರಮಾಣ ಪತ್ರ</u>

ಶ್ರೀ / ಶ್ರೀಮತಿ ________________ ರವರ ಮಗ/ಮಗಳು/ಪತಿ/ಪತ್ನಿ ಶ್ರೀ / ಶ್ರೀಮತಿ / ಕುಮಾರಿ ________________ ಜಿಲ್ಲೆ ________________ ತಾಲ್ಲೂಕು ________________ ಗ್ರಾಮದಲ್ಲಿ ________________ ವಾಸವಾಗಿರುವ ಇವರು : ಇವರ ಕುಟುಂಬದವರು ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ________________ ಯೋಜನೆಗಾಗಿ ________________ ಇಸವಿ ________ ಯಂದು ಸ್ವಾಧೀನಪಡಿಸಿಕೊಳ್ಳಲಾಗಿದೆ. ಎಂದು ಈ ಮೂಲಕ ಪ್ರಮಾಣೀಕರಿಸಿದೆ:-

(i) ** ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು;

(ii) ** ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ ; ಯೋಜನೆಯಿಂದ ತಾವು ವಾಸಿಸುವ ಮನೆ;

(iii) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ;

(iv) ** ಇತರ ಯಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ತಹಶೀಲ್ದಾರ್

________ ತಾಲ್ಲೂಕು.

(** ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು.)

ಅನುಬಂಧ - 1

## ರಾಜ್ಯ ಸರ್ಕಾರಿ/ಕೇಂದ್ರ ಸರ್ಕಾರಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ

ಶ್ರೀ/ಶ್ರೀಮತಿ . . . . . . . . . . . . . . . . . . . ರವರು ರಾಜ್ಯ/ಕೇಂದ್ರ ಸರ್ಕಾರದಲ್ಲಿ . . . . . . . . . . . . . . . . . (ಪದನಾಮ) . . . . . . . . . . . . . . ಇಲಾಖೆಯಲ್ಲಿ ಖಾಯಂ/ತಾತ್ಕಾಲಿಕ ಹುದ್ದೆಯನ್ನು ದಿನಾಂಕ: . . . . . . . . . . . . . . . . ರವರೆಗೆ ಹೊಂದಿರುವರು. ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಯಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.

ಸ್ಥಳ:
ದಿನಾಂಕ:

ನೇಮಕಾತಿ ಪ್ರಾಧಿಕಾರದ ಸಹಿ:
( ಇಲಾಖೆ, ಹೆಸರು ಮತ್ತು ಮೊಹರಿನೊಂದಿಗೆ )

## Certificate to be furnished by the State/Central Government Servant

Certified that Sri/Smt. . . . . . . . . . . . . . . . . . . . . . . . . . holds a permanent/temporary post under the State/Central Government as . . . . . . . . . . . . . . . . . . . . . . . ( Designation) in the department of . . . . . . . . . from . . . . . . . . . . having been appointed there in under the rules of recruitment. He/She is permitted to apply for the said post.

Signature of the Authority
(Authority of the Department with
Name & Seal )

## ಸ್ವೀಕೃತಿ

ಅರ್ಜಿ ನಂಬರ್:

ಶ್ರೀ/ಶ್ರೀಮತಿ . . . . . . . . . . . . . . . . . . . . ರವರಿಂದ ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಹಾಗೂ ಅದಕ್ಕೆ ಸಂಬಂಧಿಸಿದ ದಾಖಲೆಗಳ ಜೆರಾಕ್ಸ್ ಪ್ರತಿಗಳನ್ನು ಹಾಗೂ ಅರ್ಜಿ ಶುಲ್ಕ ರೂ. ಡಿ.ಡಿ. ಸಂಖ್ಯೆ: . . . . . . . . . . . . ದಿನಾಂಕ: . . . . . . . . . . . . ನ್ನು ಸ್ವೀಕರಿಸಿದೆ.
ಸ್ಥಳ:
ದಿನಾಂಕ:

ಸ್ವೀಕರಿಸಿದ ಅಧಿಕಾರಿಯ ಸಹಿ:
ಮೊಹರು

ಅನುಬಂಧ-8

ಕರ್ನಾಟಕ ಸರ್ಕಾರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸನೆನಿ 2005, ದಿನಾಂಕ 19/11/2005

## CERTIFICATE FOR THE PERSONS WITH DISABILITIES

This is to certify that Sri/Smt/Kum . . . . . . . . . . . . . . . . . . . . . . . . . . son/wife/daughter of . . . . . . . . . . . . . . . . . . . . Age . . . . . . . . .................. .old, male/female, Registration ........................ is a case of .............................................. He/She is physically disabled/visual ...d/speech & hearing disabled and has ................% (.................... . percent) permanent (physical ...ent/visual impairment speech & hearing impairment) in relation to his/her ........................................

This condition is progressive/non-progressive/likely to improve/not likely to improve*

...e-assessment is not recommended/is recommended after a period of ................months/years*

*Strike out which is not applicable

| | | | |
|---|---|---|---|
| ...Attested ...aph showing ...isability ...ixed here) | Sd/-<br>(Doctor)<br>(Seal) | Sd/-<br>(Doctor)<br>(Seal) | Sd/-<br>(Doctor)<br>(Seal) |

...ture/Thumb impression ...the disabled person.

Countersigned by the
Medical Superintendent CMO/Head of
Hospital (with seal)